## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ:ಬೆಳಗಾಂ ಶುಗರ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಬೆಳಗಾವಿ ಜಿಲ್ಲೆಯ ಬೆಳಗಾವಿ ತಾಲ್ಲೂಕಿನ ಹುದಲಿ ಗ್ರಾಮದಲ್ಲಿ 14 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಉತ್ಪಾದನೆ ಕೇಂದ್ರವನ್ನು ಸ್ಥಾಪಿಸಲು ನಿರಾಕ್ಷೇಪಣೆ ನೀಡುವ ಬಗ್ಗೆ.

ಓದಲಾಗಿದೆ: 1 ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಆದೇಶ ಸಂಖ್ಯೆ: ಸಿಐ 129 ಎಸ್‌ಪಿಐ 2015 ದಿನಾಂಕ: 04.05.2015.

2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ರವರ ಕಡತ ಸಂಖ್ಯೆ :B-97.

* * *

**ಪ್ರಸ್ತಾವನೆ: -**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು ಮೆ: ಬೆಳಗಾಂ ಶುಗರ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಬೆಳಗಾವಿ ಜಿಲ್ಲೆಯ ಬೆಳಗಾವಿ ತಾಲ್ಲೂಕಿನ ಹುದಲಿ ಗ್ರಾಮದಲ್ಲಿ 5000 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯ ಜೊತೆಗೆ 20 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ನೀಡಿರುತ್ತದೆ. ಈ ಪೈಕಿ ಸದರಿ ಮೆ: ಬೆಳಗಾಂ ಶುಗರ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರು ಸದ್ಯಕ್ಕೆ 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯನ್ನು ಸ್ಥಾಪಿಸಿ ಅದರ ಜೊತೆಯಲ್ಲಿ 14 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಉತ್ಪಾದನೆ ಕೇಂದ್ರವನ್ನು ಸ್ಥಾಪಿಸಿ, ಇದರಲ್ಲಿ ಋತುವಿನ ಹಾಗೂ ಋತುವಲ್ಲದ ಕಾಲದಲ್ಲಿ ಸಮನಾಗಿ 13 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್‌ನ್ನು ಎಕ್ಸ್‌ಪೋರ್ಟ್ ಮಾಡುವುದಾಗಿ ಅವಶ್ಯವಿರುವ ದಾಖಲೆಗಳೊಂದಿಗೆ ನಿಯಮಾನುಸಾರ ಪಾವತಿಸಬಹುದಾದ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್. ಸಂಸ್ಥೆಗೆ ಪಾವತಿಸಿ, ಯೋಜನೆಯನ್ನು 18 ತಿಂಗಳೊಳಗಾಗಿ ಪೂರ್ಣಗೊಳಿಸುವುದಾಗಿ ತಿಳಿಸಿರುವುದರಿಂದ ಈ ಪ್ರಸ್ತಾವನೆಗೆ ಸರ್ಕಾರದ ನಿರಾಕ್ಷೇಪಣಾ ಪತ್ರ ನೀಡಬಹುದೆಂಬ ಶಿಫಾರಸ್ಸಿನೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರದ ಆದೇಶ ಸಂಖ್ಯೆ: ಇಎನ್ 12 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 14.01.2016**

ಮೆ: ಬೆಳಗಾಂ ಶುಗರ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರು ಬೆಳಗಾವಿ ಜಿಲ್ಲೆಯ ಬೆಳಗಾವಿ ತಾಲ್ಲೂಕಿನ ಹುದಲಿ ಗ್ರಾಮದಲ್ಲಿ 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯನ್ನು ಸ್ಥಾಪಿಸಿ ಇದರ ಜೊತೆಯಲ್ಲಿ 14 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕವನ್ನು ಸ್ಥಾಪಿಸಲು ಹಾಗೂ ಸದರಿ ಘಟಕದಿಂದ ಉತ್ಪಾದಿಸಲಾಗುವ ವಿದ್ಯುತ್ತಿನ ಪೈಕಿ ಋತುವಿನ ಹಾಗೂ ಋತುವಲ್ಲದ ಕಾಲದಲ್ಲಿ ಸಮನಾಗಿ 13 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್‌ನ್ನು export ಮಾಡಲು ಈ ಕೆಳಗಿನ ನಿಬಂಧನೆಗಳಿಗೊಳಪಟ್ಟು ಸರ್ಕಾರದ **'ನಿರಾಕ್ಷೇಪಣೆಯನ್ನು'** ನೀಡಲಾಗಿದೆ.

1. ಅಭಿವೃದ್ಧಿದಾರರು ಉತ್ಪಾದಿಸುವ ವಿದ್ಯುತ್‌ನ Evacuation ಗೆ ಸಂಬಂಧಿಸಿದಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು;
2. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅಂದರೆ, ಅರಣ್ಯ / ಕಂದಾಯ ಇಲಾಖೆ ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಇತ್ಯಾದಿಗಳಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
3. ಅಭಿವೃದ್ಧಿದಾರರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತಕ್ಕೆ ಉಪಯೋಗಿಸಿಕೊಳ್ಳಲು/ಮೂರನೇ ವ್ಯಕ್ತಿಗೆ ಮಾರಾಟ ಮಾಡಲು/ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ವಿದ್ಯುತ್ ಖರೀದಿ ಒಡಂಬಡಿಕೆ (ಪಿಪಿಎ) ಮಾಡಿಕೊಳ್ಳಲು ಅನುಮತಿಸಿದೆ;

--2)

G.M
K.R.E.D.L.

4. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ಅನ್ವಯಿಸುವ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;

ಈ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎ.ಎ.ಚಪ್ಪರಬಂದ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎-22034674.

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
5 ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
6 ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.
7 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
8 ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಭವನ, ಚರ್ಚ್‌ಸ್ಟ್ರೀಟ್ ರಸ್ತೆ, ಬೆಂಗಳೂರು-01.
9 M/s Belgaum Sugars Private Limited., Hill Gardden, Anna Road, Gokak-591307, Tq:Gokak, Dist: Belgaum-591307.
10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.